ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರಾದ ಹೆಸರು	ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	156 (88)
ಉತ್ತರಿಸಬೇಕಾದ ದಿನಾಂಕ	01.02.2021
ಉತ್ತರಿಸಬೇಕಾದವರು	ನಗರಾಭಿವೃದ್ಧಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಹುಣಸೂರು ಪಟ್ಟಣದ ಮಧ್ಯೆ ಹರಿಯುವ ಲಕ್ಷಣತೀರ್ಥ ನದಿಯು ಕಲುಷಿತವಾಗಿದ್ದು, ಈ ನದಿಯನ್ನು ಮಾಲಿನ್ಯ ಮತ್ತು ಕಲುಷಿತ ಮುಕ್ತವಾಗಿಸಲು ಯೋಜನೆಯನ್ನು ರೂಪಿಸಲಾಗಿದಯೇ; ಯೋಜನೆಯ ವಿವರಗಳನ್ನು ಒದಗಿಸುವುದು:	ಲಕ್ಷಣತೀರ್ಥ ನದಿಯನ್ನು ಮಾಲಿನ್ಯ ಮತ್ತು ಕಲುಷಿತ ಮುಕ್ತವಾಗಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಯೋಜನೆಯನ್ನು ರೂಪಿಸಲಾಗಿದೆ. ಹುಣಸೂರು ನಗರಕ್ಕೆ ಪ್ರಸ್ತುತ ಶೇ.31 ರಷ್ಟು ಒಳಚರಂಡಿ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ನಗರವು ಗಮನಾರ್ಹವಾಗಿ ಅಭಿವೃದ್ಧಿಗೊಂಡಿದ್ದು, ಹೊಸದಾಗಿ ಅಭಿವೃದ್ಧಿ ಹಾಗೂ ವಿಸ್ತರಣೆಗೊಂಡಿರುವ ಪ್ರದೇಶಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ನೀರು ಒಳಚರಂಡಿ ಜಾಲ ಇಲ್ಲದ ಕಾರಣ ತೆರೆದ ಚರಂಡಿ ಹಾಗೂ ನಾಲಾಗಳ ಮುಖಾಂತರ ಹರಿದು ಲಕ್ಷ್ಮಣತೀರ್ಥ ನದಿಯನ್ನು ಸೇರಿ ಕಲುಷಿತಗೊಳ್ಳುತ್ತಿದೆ. ಈ ಹಿನ್ನಲೆಯಲ್ಲಿ ನಗರದಲ್ಲಿ ಸಂಪೂರ್ಣವಾಗಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು 2ನೇ ಹಂತದ ಒಳಚರಂಡಿ ಯೋಜನೆಯನ್ನು ರೂಪಿಸಲಾಗಿದೆ.
ಆ.	ಈ ಯೋಜನೆಯ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಕೇಂದ್ರ ಸರ್ಕಾರದಿಂದ ಈ ಯೋಜನೆಗೆ ನೆರವು ದೊರಕಲಿದೆಯೇ; ಈ ಯೋಜನೆಯನ್ನು ಜಾರಿಗೊಳಿಸುವ ಮೂಲಕ ಹುಣಸೂರು ಪಟ್ಟಣದ ಮಧ್ಯೆ ಹರಿಯುವ ಈ ನದಿಯನ್ನು ಮಾಲಿನ್ಯ ಮುಕ್ತವಾಗಿಸಿ ಸ್ವಚ್ಛತೆಯನ್ನು ಕಾಪಾಡಲು ಕ್ರಮ ಜರುಗಿಸಲಾಗುವುದೇ ?	ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಹುಣಸೂರು ನಗರದ 2ನೇ ಹಂತದ ಒಳಚರಂಡಿ ಯೋಜನೆಗೆ ರೂ.2680.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಸಂಖ್ಯೆ ನಅಇ 25 ಯುಎಂಎಸ್ 2021

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು